ಗ್ರಾಮಾಂತರ ಪ್ರದೇಶದ ನೀರಿನ ಸಮಸ್ಯೆ

39(3404); ಶ್ರೀ ರಮೇಶ ಬಂಡಿಸಿದ್ದೇಗೌಡ ಎ.ಬಿ. (ಶ್ರೀರಂಗಪಟ್ಟಣ)

ಅ) ಪ್ರಸಕ್ತ ಸಾಲಿನ ಬೇಸಿಗೆಯಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ಅಭಾವವಿರುವ ಪ್ರದೇಶಗಳಲ್ಲಿ ಸರ್ಕಾರ ಯಾವ ಯಾವ ಮುಂಜಾಗ್ರತಾ ಕ್ರಮ ವಹಿಸಿದೆ;

ಆ) ಪ್ರಸಕ್ತ ಸಾಲಿನಲ್ಲಿ ಇಲಾಖೆ ಯಾವ ಯೋಜನೆಗಳಲ್ಲಿ ಎಷ್ಟೆಷ್ಟು ಅನುದಾನ ಒದಗಿಸಲಾಗಿದೆ (ಯೋಜನೆವಾರು, ಜಿಲ್ಲೆ ಹಾಗೂ ತಾಲ್ಲೂಕುವಾರು ಬಿಡುಗಡೆ ಮಾಡಿರುವ ಅನುದಾನದ ವಿವರ ಒದಗಿಸುವುದು)

ಇ) ಕಳೆದ 2 ವರ್ಷಗಳ ಅವಧಿಯಲ್ಲಿ ಕುಡಿಯುವ ನೀರಿನ ಯೋಜನೆಗಾಗಿ ಕೇಂದ್ರ ಸರ್ಕಾರದಿಂದ ಬಿಡಗಡೆ ಮಾಡಿರುವ ಅನುದಾನವೆಷ್ಟು ಹಾಗೂ ರಾಜ್ಯದ ಪಾಲೆಷ್ಟು; (ಯೋಜನೆವಾರು, ಜಿಲ್ಲೆ ಹಾಗೂ ತಾಲ್ಲೂಕುವಾರು ಬಿಡುಗಡೆ ಮಾಡಿರುವ ಅನುದಾನದ ವಿವರ ಒದಗಿಸುವುದು)?

ಶ್ರೀ ಹೆಚ್.ಕೆ. ಪಾಟೀಲ್ (ಪೌರ್ಯ ಗ್ರಾ. ಅ. ಮತ್ತು ಪಂ. ರಾಜ್ ಸಚಿವರು)

ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿನ ಪ್ರಸಕ್ತ ಸಾಲಿನ ಬೇಸಿಗೆಯಲ್ಲಿ ಉಂಟಾಗಬಹುದಾದ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಸಮಸ್ಯಾತ್ಮಕ ಜನವಸತಿಗಳಲ್ಲಿ, ಜಿಲ್ಲಾಧಿಕಾರಿಗಳ ಸಮನ್ವಯದಲ್ಲಿ ಜಿಲ್ಲಾಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಖಾಸಗಿ ಬೋರ್‌ವೆಲ್‌ಗಳ ಸೇವೆ ಪಡೆಯುವುದು, ಸಾಗಾಣಿಕೆ ಮುಖೇನ ನೀರು ಪೂರೈಸುವುದು, ಹೈಡ್ರೋಫ್ರಾಕ್ಚರಿಂಗ್‌ಗೊಳಿಸುವುದು, ದುರಸ್ತಿ ಮತ್ತು ಪುನ:ಶ್ಚೇತನ ಕಾಮಗಾರಿಗಳನ್ನು ತಕ್ಷಣ ಪೂರ್ಣಗೊಳಿಸುವುದು ಹಾಗೂ ಅನಿವಾರ್ಯವಿದ್ದಲ್ಲಿ ಮಾತ್ರ ಕೊಳವೆ ಬಾವಿಗಳನ್ನು ಕೊರೆಯುವಂತಹ ಕಾಮಗಾರಿಗಳನ್ನು ಕೈಗೊಳ್ಳಲು ಎಲ್ಲಾ ಜಿಲ್ಲಾ ಪಂಚಾಯತಿಗಳಿಗೆ ನಿರ್ದೇಶಿಸಲಾಗಿದೆ. ತಾಲ್ಲೂಕು ಮಟ್ಟದಲ್ಲಿ ಸ್ಥಾಪನೆಯಾಗಿರುವ 'ಕಂಟ್ರೋಲ್ ರೂಂ'ಗಳನ್ನು ಚುರುಕುಗೊಳಿಸಿ,

ದೂರು ಸ್ವೀಕೃತಿಯಾದ ಕೂಡಲೇ 24 ಗಂಟೆಯೊಳಗೆ ಸ್ಪಂದಿಸಿ, ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಕಟ್ಟುನಿಟ್ಟಿನ ಆದೇಶ ನೀಡಲಾಗಿದೆ.

ಆ) ಪ್ರಸಕ್ತ ಸಾಲಿನಲ್ಲಿ ಟಾಸ್ಕ್‌ಫೋರ್ಸ್‌ಯಡಿ **ರೂ. 26749.00 ಲಕ್ಷಗಳನ್ನು** ಜಿಲ್ಲಾವಾರು ಬಿಡುಗಡೆ ಮಾಡಲಾಗಿದೆ. ವಿವರಗಳನ್ನು **ಅನುಬಂಧ–1ರಲ್ಲಿ** ನೀಡಲಾಗಿದೆ. ಕೋಲಾರ ಜಿಲ್ಲೆಯ **ರೂ. 2098.00 ಲಕ್ಷಗಳ** ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ **ರೂ.584.72 ಲಕ್ಷಗಳ** ತುರ್ತು ಕುಡಿಯುವ ನೀರಿನ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ನೀಡಲಾಗಿದೆ. ಸರ್ಕಾರದಿಂದ ಜಿಲ್ಲಾವಾರು ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಸ್ಥಳೀಯ ಅಗತ್ಯತೆಯನುಸಾರ ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲ್ಲೂಕುವಾರು ಹಂಚಿಕೆ ಮಾಡುತ್ತಾರೆ.

ಇ) ಕಳೆದ 2 ವರ್ಷಗಳ ಅವಧಿಯಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಕಾರ್ಯಕ್ರಮದಡಿ ಕೇಂದ್ರ ಮತ್ತು ರಾಜ್ಯ ವಲಯಗಳಡಿ ಬಿಡುಗಡೆ ಮಾಡಿರುವ ಅನುದಾನದ ವಿವರಗಳನ್ನು **ಅನುಬಂಧ–2ರಲ್ಲಿ** ನೀಡಿದೆ. ಸದರಿ ಅನುದಾನ ವಿನಿಯೋಗದ ತಾಲ್ಲೂಕುವಾರು ವಿವರಗಳನ್ನು **ಅನುಬಂಧ–1ರಲ್ಲಿ** ಲಗತ್ತಿಸಿದೆ.